# ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ (ಸರಕಾರಿ, ಅನುದಾನಿತ, ಅನುದಾನ ರಹಿತ, ಖಾಸಗಿ) ಶಿಕ್ಷಣ ರಹಿತ ವಸತಿ ನಿಲಯ//ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ, ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 (ಪರಿಷ್ಕರಣೆ 2023) ರ ಪ್ರಕಾರ ಅನುಷ್ಠಾನದ ಬಗ್ಗೆ ಕೈಗೊಳ್ಳಬೇಕಾದ ಪ್ರಮುಖ ಕಾರ್ಯಗಳು

1. ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016ರ ಮಾರ್ಗಸೂಚಿ ಮತ್ತು ಮಾನದಂಡದಂತೆ ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ/ಶಿಕ್ಷಣ ರಹಿತ ವಸತಿ ನಿಲಯ/ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳು/ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ **"ಶಾಲಾ ಮಕ್ಕಳ ರಕ್ಷಣಾ ನೀತಿ"** ಯನ್ನು ರಚಿಸಿ ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆದು ತಮ್ಮ ಶಾಲೆ/ಸಂಸ್ಥೆಯಲ್ಲಿ ಅನುಷ್ಠಾನ ಮಾಡುವುದು. (ತಮ್ಮ ಇಲಾಖೆಯ ತಾಲ್ಲೂಕ/ಜಿಲ್ಲಾ ಮಟ್ಟದ ಆಧಿಕಾರಿಗಳ ಮುಖಾಂತರ).

2. ಚೈಲ್ಡ್ ಲೈನ್/**"ಮಕ್ಕಳ ಸಹಾಯವಾಣಿ ಸಂಖ್ಯೆ 1098/112"** ನ್ನು ಕಡ್ಡಾಯವಾಗಿ ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ/ಶಿಕ್ಷಣ ರಹಿತ ವಸತಿ ನಿಲಯ/ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳು/ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ ಗುಣಮಟ್ಟದ ರೂಪದಲ್ಲಿ ಶಾಶ್ವತವಾಗಿ ಇರುವಂತೆ ಗೋಡೆ ಬರಹದ ಮುಖಾಂತರ ಪ್ರದರ್ಶಿಸುವುದು.

3. ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ/ಶಿಕ್ಷಣ ರಹಿತ ವಸತಿ ನಿಲಯ/ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳು/ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ **ಮಕ್ಕಳ ಹಕ್ಕುಗಳು, ಮಕ್ಕಳ ಸಂರಕ್ಷಣೆ,** ಮಕ್ಕಳು ಮತ್ತು ಕಿಶೋರ ಕಾರ್ಮಿಕ (ನಿಷೇಧ ನಿಯಂತ್ರಣ ) ಕಾಯ್ದೆ–1986, ಬಾಲ್ಯ ವಿವಾಹ ನಿಷೇಧ ಕಾಯ್ದೆ–2006, ಮಕ್ಕಳ ನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015 ತಿದ್ದುಪಡಿ 2021, ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯ್ದೆ–2012, ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಶದ ಹಾಗೂ ವಿಪತ್ತು ಎದುರಿಸುವುದು, ಪರಿಹಾರಗಳ ಬಗ್ಗೆ ತರಬೇತಿಗಳನ್ನು ನಡೆಸುವುದು. ***"ನಾನು ಎಲ್ಲಾ ರೀತಿಯ ಶೋಷಣೆಗಳಿಂದ, ಜಾಲತಾಣ ಹಾಗೂ ಸಾಮಾಜಿಕ ಮಾಧ್ಯಮಗಳ ವಂಚನೆ, ಮಾದಕ ವ್ಯಸನಗಳಿಂದ ಮುಕ್ತವಾಗಿ, ಸೈಬರ್ ಸುರಕ್ಷತೆ ಮತ್ತು ಎಲ್ಲಾ ರೀತಿಯ ಬೆದರಿಸುವ ಕೃತ್ಯಗಳನ್ನು ಎದುರಿಸುವ ಜ್ಞಾನ ಪಡೆದು, ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳುತ್ತೇನೆ, ಅವುಗಳಿಗೆ ಬಲಿಯಾಗುವುದಿಲ್ಲ. ಬಾಲ್ಯ ವಿವಾಹ ಮತ್ತು ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯಂತಹ ಯಾವುದೇ ಅಭಿವೃದ್ಧಿ ಮಾರಕ ಪಿಡುಗುಗಳಿಗೆ ಒಳಗಾಗುವುದಿಲ್ಲ. ಒಂದುವೇಳೆ ಪ್ರಕರಣಗಳು ಕಂಡುಬಂದರೆ ಸಂಬಂಧಿಸಿದವರಿಗೆ ಧೈರ್ಯವಾಗಿ ದೂರು ನೀಡುತ್ತೇನೆ"*** ಎಂಬ ಬದ್ಧತೆಯನ್ನು ಎಲ್ಲಾ ಮಕ್ಕಳಿಂದ ಪಡೆಯುವುದು.

4. ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ/ಶಿಕ್ಷಣ ರಹಿತ ವಸತಿ ನಿಲಯ/ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳು/ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ **'ಶಾಲಾ ಮಕ್ಕಳ ರಕ್ಷಣಾ ಸಮಿತಿ'** (ಸಿ.ಪಿ.ಸಿ) ರಚಿಸಿ ಕ್ರಿಯಾಶೀಲ ಅನುಷ್ಠಾನಕ್ಕೆ ತರುವುದು.

**5. ಈ ಸಮಿತಿಯು 3 ತಿಂಗಳಿಗೊಮ್ಮೆ ಸಭೆ ನಡೆಸುವುದು ಕಡ್ಡಾಯ. ವರ್ಷಕ್ಕೆ 4 ಸಭೆ ನಡೆಸಿ, ನಡಾವಳಿ ಪುಸ್ತಕ ನಿರ್ವಹಿಸುವುದು. ನಡಾವಳಿ ಪುಸ್ತಕವನ್ನು/ಕಡತವನ್ನು ಕಡ್ಡಾಯವಾಗಿ ನಿರ್ವಹಿಸುವುದು.**

6. **ಪ್ರತಿ ಸಿಬ್ಬಂದಿಯಿಂದ ಬದ್ಧತಾ ಸ್ವೀಕಾರ ಪತ್ರ ಪಡೆಯುವುದು.** (ಪ್ರತಿ 2 ವರ್ಷಕ್ಕೊಮ್ಮೆ ತಿದ್ದುಪಡಿ ಇದ್ದಲ್ಲಿ ತಿದ್ದುಪಡಿ ಮಾಡಿ ಹೊಸ ಬದ್ಧತಾ ಪತ್ರಕ್ಕೆ ಪ್ರತಿಯೊಬ್ಬರಿಂದ ಸಹಿ ಪಡೆದು ಕಡತ ನಿರ್ವಹಿಸುವುದು) ಪ್ರತ್ಯೇಕ ಕಡತವನ್ನು ಕಡ್ಡಾಯವಾಗಿ ನಿರ್ವಹಿಸುವುದು.

7. ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ (ಸರಕಾರಿ, ಅನುದಾನಿತ, ಅನುದಾನ ರಹಿತ, ಖಾಸಗಿ) ಶಿಕ್ಷಣ ರಹಿತ ವಸತಿ ನಿಲಯ//ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ, ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳಲ್ಲಿ ಮಕ್ಕಳಿಗೆ ಲಭ್ಯವಾಗುವಂತೆ **ಸಲಹಾ/ದೂರು ಪೆಟ್ಟಿಗೆ ಅಳವಡಿಸುವುದು.** (75 ಮಕ್ಕಳಿಗೆ 1 ರಂತೆ ಪೆಟ್ಟಿಗೆ ಅಳವಡಿಸಬೇಕು. ಅವುಗಳು ಮಕ್ಕಳಿಗೆ ಸುಲಭವಾಗಿ ಸಿಗುವಂತಿರಬೇಕು.

8. ಸಲಹಾ/ದೂರು ಪೆಟ್ಟಿಗೆಯಲ್ಲಿರುವ ದೂರುಗಳನ್ನು ವಾರಕ್ಕೊಮ್ಮೆ **ಮಕ್ಕಳ ರಕಣಾ ಸಮಿತಿಯ** ಸದಸ್ಯರೊಂದಿಗೆ (ಮಕ್ಕಳ ಸದಸ್ಯರ ಹಾಜರಾತಿ ಕಡ್ಡಾಯ) ತೆಗೆದು ಮಕ್ಕಳ ಎಲ್ಲಾ ಸಲಹೆ/ದೂರುಗಳನ್ನು ಗೌರವದಿಂದ ಸ್ವೀಕರಿಸಿ ಅದನ್ನು ಪ್ರಾಮಾಣಿಕವಾಗಿ ಪರಿಹರಿಸಬೇಕು. ಬೇರೆ ಇಲಾಖೆಗಳಿಗೆ ಸಂಬಂದಿಸಿದ್ದಾದಲ್ಲಿ ವಿಂಗಡಿಸಬೇಕು, ಆಯಾ ದೂರುಗಳನ್ನು ಆಯಾ ಇಲಾಖೆಗೆ ಹಸ್ತಾಂತರಿಸಬೇಕು.

9. ಸಲಹಾ/ದೂರು ಪೆಟ್ಟಿಗೆಯ ದಾಖಲೆಯ ಬಗ್ಗೆ ಕೈಗೊಂಡ ಕ್ರಮದ ನಡಾವಳಿ ಪುಸ್ತಕವನ್ನು ನಿರ್ವಹಿಸಬೇಕು ಮತ್ತು ಮಕ್ಕಳ ಸಲಹಾ ಪತ್ರ/ಚೀಟಿಗಳನ್ನು ಪ್ರತ್ಯೇಕವಾಗಿ ಎ4 ಕಾಗದದಲ್ಲಿ ಅಂಟಿಸಿ ಪ್ರತ್ಯೇಕ ಕಡತ ನಿರ್ವಹಿಸಬೇಕು. ಮಕ್ಕಳ ಸಲಹೆ ದೂರುಗಳಿಗೆ ಕೈಗೊಂಡ ಕ್ರಮ/ಪರಿಹಾರ/ತೀರ್ಮಾನದ ಬಗ್ಗೆ ನಡಾವಳಿ ಪುಸ್ತಕದಲ್ಲಿ ಬರೆಯಬೇಕು. ಆದರೆ ಸಲಹೆ/ದೂರು ನೀಡಿದ ಮಗುವಿನ ಹೆಸರನ್ನು ನಡಾವಳಿ ಪುಸ್ತಕದಲ್ಲಿ ದಾಖಲಿಸಬಾರದು, ಮಗು ಬರೆದ ಚೀಟಿಗೆ ಕ್ರಮ ಸಂಖ್ಯೆ ಬರೆದು ಆ ಕ್ರಮ ಸಂಖ್ಯೆಯನ್ನಷ್ಟೇ ನಮೂದಿಸಬೇಕು)

10. ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ/ಶಿಕ್ಷಣ ರಹಿತ ವಸತಿ ನಿಲಯ/ ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳು/ಶಿಕ್ಷಣ ಸಹಿತ ವಸತಿ ಶಾಲೆಯಲ್ಲಿ **'ಮಕ್ಕಳ ಹಕ್ಕುಗಳ ಕ್ಲಬ್'** ರಚಿಸಿ ಕ್ರಿಯಾಶೀಲವಾಗಿ ಅನುಷ್ಠಾನಕ್ಕೆ ತರುವುದು ಕಡ್ಡಾಯ. ಇದರ ನಡಾವಳಿ ಪುಸ್ತಕವನ್ನು ಪ್ರತ್ಯೇಕವಾಗಿ ನಿರ್ವಹಿಸುವುದು.

11. ರಾಜ್ಯದ ಪ್ರತಿಯೊಂದು ಶಾಲೆ/ಪದವಿ ಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆ/ಶಿಕ್ಷಣ ರಹಿತ ವಸತಿ ನಿಲಯ/ಮಕ್ಕಳ ಪೋಷಣಾ ಮತ್ತು ರಕ್ಷಣಾ ಸಂಸ್ಥೆಗಳು/ಶಿಕ್ಷಣ ಸಹಿತ ವಸತಿ ಶಾಲೆಗಳಲ್ಲಿ ವ್ಯಾಪ್ತಿಯಲ್ಲಿ **ಮಕ್ಕಳ ಭಾಗವಹಿಸುವಿಕೆಯ** ಮುಖಾಂತರ, ಮಕ್ಕಳ ಅಭಿವೃದ್ಧಿ ಸೂಚ್ಯಂಕಗಳನ್ನು ಮೇಲೆತ್ತುವ ಆಯಾ ಗ್ರಾಮ ಪಂಚಾಯತಿಯಲ್ಲಿ ಪ್ರತಿ ವರ್ಷ ನಡೆಯುವ **ಮಕ್ಕಳ ಹಕ್ಕುಗಳ ಗ್ರಾಮ ಸಭೆ** ಹಾಗೂ **ಗ್ರಾಮ ಪಂಚಾಯತಿಯಲ್ಲಿ ವರ್ಷಕ್ಕೆ 4 ಸಲ ನಡೆಯುವ 'ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಸಮಿತಿ' ಗಳ ಸಭೆಗಳಲ್ಲಿ ಭಾಗವಹಿಸಿ ತಮ್ಮ ಅನಿಸಿಕೆ, ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಅವಕಾಶ ಕಲ್ಪಿಸುವುದು.**

12. ತಿಂಗಳಿಗೊಂದು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿ ಮಕ್ಕಳಿಗೆ ಜ್ಞಾನಾರ್ಜನೆಯನ್ನು ಮಾಡುವುದರ ಮುಖಾಂತರ **ಸಬಲೀಕರಣಗೊಳಿಸುವುದು ಹಾಗೂ ಮಕ್ಕಳಿಗೆ ಅವರ ಅನಿಸಿಕೆ, ಅಭಿಪ್ರಾಯ, ಸಲಹೆ ಮತ್ತು ದೂರುಗಳನ್ನು ನೀಡುವ ಹಾಗೂ ವರದಿ ಮಾಡುವ ವ್ಯವಸ್ಥೆಯನ್ನು ಬಲಪಡಿಸುವುದು.**